# ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001**

**ಸಂಖ್ಯೆ: ಸಹನಿಶಾಶಿ.ಆಶಾ/ಕ.ವ.ಕು.ಚಾ.ಸು/32544/ಇ.ವಿ.2020** **ದಿನಾಂಕ: 28–4–2020**

**–: ಸುತ್ತೋಲೆ :–**

ವಿಷಯ : ಖಾಸಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಶುಲ್ಕ ಪಡೆಯುವ ಬಗ್ಗೆ.
ಉಲ್ಲೇಖ : ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 24–4–2020

****

ಕೊರೋನಾ ವೈರಸ್ ಹರಡುತ್ತಿರುವ ಹಿನ್ನೆಲೆಯಲ್ಲಿ ದೇಶದಾದ್ಯಂತ ಲಾಕ್‌ಡೌನ್ ಜಾರಿಯಲ್ಲಿದ್ದು, ಉಲ್ಲೇಖಿತ ಪತ್ರದ ಮೂಲಕ ಮಕ್ಕಳ ಶುಲ್ಕವನ್ನು ಪಾವತಿಸಲು ಆರ್ಥಿಕವಾಗಿ ಸಮರ್ಥರಿರುವ ಹಾಗೂ ಶುಲ್ಕವನ್ನು ಸ್ವಯಂ ಪ್ರೇರಿತವಾಗಿ ಭರಿಸಲು ಮುಂದಾಗುವ ಪೋಷಕರಿಂದ ಮಾತ್ರ ಶುಲ್ಕ ವಸೂಲಾತಿ ಮಾಡಲು ಅವಕಾಶ ನೀಡಲಾಗಿತ್ತು.

ಮುಂದುವರೆದು, ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯಕ್ರಮದ ನಿಗಧಿ ಇತ್ಯಾದಿ) ನಿಯಮಗಳು 1995ರ ನಿಯಮ 10ರ ಉಪನಿಯಮ 7ರಲ್ಲಿ ಈ ಕೆಳಕಂಡಂತೆ ಇರುತ್ತದೆ.

**"ವಿದ್ಯಾರ್ಥಿಗಳು ಮತ್ತು ಪೋಷಕರ ಆಯ್ಕೆಯಂತೆ ಶಾಲಾ ಶುಲ್ಕವನ್ನು ಪ್ರತಿ ಮಾಹೆವಾರು, ತ್ರೈಮಾಸಿಕವಾರು, ಅರ್ಧವಾರ್ಷಿಕವಾರು ಕಂತುಗಳ ಮೂಲಕ ಅಥವಾ ವರ್ಷದ ಶುಲ್ಕವನ್ನು ಒಂದೇ ಬಾರಿಗೆ ಪಾವತಿಸಲು ಅವಕಾಶ ಕಲ್ಪಿಸಲಾಗಿರುತ್ತದೆ".**

ಮೇಲಿನ ಅವಕಾಶದ ಬಗ್ಗೆ ಎಲ್ಲಾ ಖಾಸಗಿ ಶಾಲೆಗಳು ಪೋಷಕರ ಗಮನಕ್ಕೆ ತರಲು ಸೂಚಿಸಿದೆ.

ಮುಂದುವರೆದು, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 317 ಪಿಜಿಸಿ 2013, ದಿನಾಂಕ: 18–05–2018ರಂತೆ ಪ್ರತಿವರ್ಷ ಬೋಧನಾ ಶುಲ್ಕವನ್ನು ಶೇ 15% ರ ಮಿತಿಯೊಳಗೆ ಹೆಚ್ಚಿಸಲು ಅವಕಾಶವಿರುತ್ತದೆ. ಆದರೆ, ಕೋವಿಡ್–19 ವೈರಸ್ ಹರಡುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದಾದ್ಯಂತ ಲಾಕ್‌ಡೌನ್ ಇರುವುದರಿಂದ, ಪೋಷಕರು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವ ಹಿನ್ನೆಲೆಯಲ್ಲಿ 2020–21ನೇ ಸಾಲಿಗೆ ಖಾಸಗಿ ಶಾಲಾ ಆಡಳಿತ ಮಂಡಳಿಯವರು ಯಾವುದೇ ಶುಲ್ಕವನ್ನು ಹೆಚ್ಚಿಸದಂತೆ ಸೂಚಿಸಿದೆ. ಹಾಗೂ ಶಾಲಾ ಆಡಳಿತ ಮಂಡಳಿಯವರು ಕಳೆದ ಸಾಲಿನಲ್ಲಿ ಪಡೆದ ಶುಲ್ಕಕ್ಕಿಂತ ಕಡಿಮೆ ಶುಲ್ಕವನ್ನು ಪಡೆಯಲು ಇಚ್ಛಿಸಿದಲ್ಲಿ ಸಂಸ್ಥೆಯವರು ಸ್ವತಂತ್ರರಾಗಿರುತ್ತಾರೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ